ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೋರ್ಟ್ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE 5/11/20

# ಮಾಜಿ ಸಚಿವ ಜಾರ್ಜ್ ವಿರುದ್ಧದ ಪ್ರಕರಣ ರದ್ದು

**ಬೆಂಗಳೂರು:** ಡಿವೈಎಸ್ಪಿ ಎಂ.ಕೆ. ಗಣಪತಿ ಆತ್ಮಹತ್ಯೆ ಪ್ರಕರಣ ಸಂಬಂಧ ಮಾಜಿ ಸಚಿವ ಕೆ.ಜೆ. ಜಾರ್ಜ್ ಹಾಗೂ ಇಬ್ಬರು ಐಪಿಎಸ್ ಅಧಿಕಾರಿಗಳ ವಿರುದ್ಧ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ನಡೆಯುತ್ತಿದ್ದ ವಿಚಾರಣೆಯನ್ನು ಹೈಕೋರ್ಟ್ ರದ್ದುಪಡಿಸಿದೆ.



ಪ್ರಕರಣದ ಸಂಬಂಧ ಸಿಬಿಐ ಸಲ್ಲಿಸಿದ್ದ ಬಿ ರಿಪೋರ್ಟ್ ತಿರಸ್ಕರಿಸಿ, ವಿಶೇಷ ನ್ಯಾಯಾಲಯ ಜಾರಿಗೊಳಿಸಿದ್ದ ಸಮನ್ಸ್ ಹಾಗೂ ಪ್ರಕರಣ ರದ್ದು ಕೋರಿ ಕೆ.ಜೆ. ಜಾರ್ಜ್, ಐಪಿಎಸ್ ಅಧಿಕಾರಿಗಳಾದ ಪ್ರಣಬ್ ಮೊಹಾಂತಿ ಹಾಗೂ ಎ.ಎಂ. ಪ್ರಸಾದ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ಅರ್ಜಿಗಳ ವಿಚಾರಣೆ ಪೂರ್ಣಗೊಳಿಸಿ ಕಾಯ್ದಿರಿಸಿದ್ದ ತೀರ್ಪನ್ನು ಬುಧವಾರ ಪ್ರಕಟಿಸಿದ ನ್ಯಾಯಮೂರ್ತಿ ಜಾನ್ ಮೈಕೆಲ್ ಕುನ್ಹಾ ಅವರಿದ್ದ ಏಕಸದಸ್ಯ ನ್ಯಾಯಪೀಠ, ಸಿಬಿಐ ಸಲ್ಲಿಸಿದ್ದ ಬಿ ರಿಪೋರ್ಟ್ ಎತ್ತಿಹಿಡಿದಿದ್ದು ಮೂವರೂ ಅರ್ಜಿದಾರರ ವಿರುದ್ಧದ ವಿಶೇಷ ನ್ಯಾಯಾಲಯದ ವಿಚಾರಣೆಯನ್ನು ರದ್ದುಪಡಿಸಿ ಆದೇಶ ನೀಡಿದೆ.

ಪ್ರಕರಣದಲ್ಲಿ ಅರ್ಜಿದಾರರ ಪಾತ್ರವಿದೆ ಎಂದು ದಾಖಲೆಗಳಿಂದ ಸಾಬೀತಾಗಿಲ್ಲ. ಅರ್ಜಿದಾರರ ವಿರುದ್ಧ ಕೈಗೊಳ್ಳಲಾಗಿರುವ ಕ್ರಮ ಸಂಪೂರ್ಣವಾಗಿ ಕಾನೂನು ಬಾಹಿರವಾಗಿದ್ದು ನ್ಯಾಯಾಂಗ ಪ್ರಕ್ರಿಯೆಯ ದುರುಪಯೋಗವಾಗಿದೆ. ಆದ್ದರಿಂದ, ಅವರ ವಿರುದ್ಧದ ಪ್ರಕರಣ ರದ್ದುಪಡಿಸಬಹುದಾಗಿದೆ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ.